## ಸಾರಾಂಶ

ವಿಧಾನ ಪರಿಷತ್ತಿನ 149ನೇ ಅಧಿವೇಶನದಲ್ಲಿ ನಡೆದಿರುವ ಕಾರ್ಯಕಲಾಪಗಳ ವಿವರವನ್ನು ಸದನಕ್ಕೆ ತಿಳಿಸಲು ಇಚ್ಛಿಸುತ್ತೇನೆ. ಪ್ರಸ್ತುತ ಅಧಿವೇಶನವು ದಿನಾಂಕ:10.02.2023 ರಿಂದ 24.02.2023 ರವರೆಗೆ ಒಟ್ಟು 11 ದಿನಗಳು ಅಂದರೆ, 52 ಗಂಟೆಗಳು ನಡೆಸಲಾಗಿರುತ್ತದೆ.

ದಿನಾಂಕ:10.02.2023ರಂದು ಬೆಳಗ್ಗೆ 11.00 ಗಂಟೆಗೆ ಘನತೆವೆತ್ತ ರಾಜ್ಯಪಾಲರು ವಿಧಾನ ಮಂಡಲದ ಉಭಯ ಸದನಗಳನ್ನುದ್ದೇಶಿಸಿ ಭಾಷಣ ಮಾಡುವುದರೊಂದಿಗೆ ಪ್ರಾರಂಭಗೊಂಡಿತು. ವಂದನಾ ನಿರ್ಣಯದ ಮೇಲೆ 11 ಗಂಟೆ 38 ನಿಮಿಷಗಳು ಚರ್ಚೆ ನಡೆಸಿ ದಿನಾಂಕ:21.02.2023ರಂದು ರಾಜ್ಯಪಾಲರ ಭಾಷಣಕ್ಕೆ ಸಂಬಂಧಿಸಿದಂತೆ ವಂದನಾರ್ಪಣಾ ನಿರ್ಣಯವನ್ನು ಸದನವು ಅಂಗೀಕರಿಸಿತು.

ಕಳೆದ ಅಧಿವೇಶನದಿಂದೀಚೆಗೆ ನಿಧನರಾದ ಗಣ್ಯರುಗಳಿಗೆ ಸದನವು ತನ್ನ ಸಂತಾಪವನ್ನು ವ್ಯಕ್ತಪಡಿಸಿತು ಹಾಗೂ ಶ್ರೀ ಸಿದ್ದೇಶ್ವರ ಸ್ವಾಮೀಜಿಯವರಿಗೆ ಸದನದ ಮೂಲಕ ನುಡಿ ನಮನವನ್ನು ಸಲ್ಲಿಸಲಾಯಿತು.

ಕಳೆದ ಅಧಿವೇಶನದಲ್ಲಿ ವರದಿಯನ್ನು ಒಪ್ಪಿಸಿದ ನಂತರ ರಾಷ್ಟ್ರಪತಿಯವರಿಂದ ಹಾಗೂ ರಾಜ್ಯಪಾಲರಿಂದ ಒಪ್ಪಿಗೆ ಪಡೆದ ವಿಧೇಯಕಗಳ ಪಟ್ಟಿಯನ್ನು ಕಾರ್ಯದರ್ಶಿಯವರು ಮಂಡಿಸಿದರು.

ದಿನಾಂಕ: 17.02.2023ರಂದು ಮಾನ್ಯ ಮುಖ್ಯಮಂತ್ರಿಯವರು 2023–24ನೇ ಸಾಲಿನ ಆಯವ್ಯಯ ಅಂದಾಜುಗಳನ್ನು ಒಪ್ಪಿಸಿದರು. ಆಯವ್ಯಯ ಅಂದಾಜುಗಳ ಮೇಲೆ ಸುಮಾರು 7 ಗಂಟೆ 50 ನಿಮಿಷಗಳ ಕಾಲ ಚರ್ಚೆ ನಡೆಸಿ, ದಿನಾಂಕ:24.02.2023ರಂದು ಸರ್ಕಾರದಿಂದ ಉತ್ತರಿಸಲಾಯಿತು.

ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ 01, 02, 03, 04 ಹಾಗೂ 05ನೇ ಪಟ್ಟಿಗಳನ್ನು ಮಂಡಿಸಲಾಯಿತು.

ಕರ್ನಾಟಕ ವಿಧಾನ ಮಂಡಲದ ಸಾರ್ವಜನಿಕ ಲೆಕ್ಕಪತ್ರಗಳ ಸಮಿತಿಯ 2011–12 ರಿಂದ 2019–20ನೇ ಸಾಲಿನ 10ನೇ ವರದಿ ಹಾಗೂ 2017–18ನೇ ಸಾಲಿನ 11ನೇ ವರದಿ, ಸಾರ್ವಜನಿಕ ಉದ್ಯಮಗಳ ಸಮಿತಿಯ 134 ಹಾಗೂ 135ನೇ ವರದಿ, ಸಭೆಯ ಮುಂದಿಡಲಾಗುವ ಕಾಗದ ಪತ್ರಗಳ ಸಮಿತಿಯ 38ನೇ ವರದಿ, ಸ್ಥಳೀಯ ಸಂಸ್ಥೆಗಳ ಮತ್ತು ಪಂಚಾಯತ್ ರಾಜ್ ಸಂಸ್ಥೆಗಳ ಸಮಿತಿಯ 38ನೇ ವರದಿ, ಅನುಸೂಚಿತ ಜಾತಿ ಮತ್ತು ಅನುಸೂಚಿತ ಪಂಗಡಗಳ ಕಲ್ಯಾಣ ಸಮಿತಿಯ 2021–22 ಹಾಗೂ 2022–23ನೇ ಸಾಲಿನ 7ನೇ ವರದಿಗಳನ್ನು ಮಂಡಿಸಲಾಯಿತು.

ರಾಜ್ಯದಲ್ಲಿ 2021–22ನೇ ಸಾಲಿನಲ್ಲಿ ಹೊಸದಾಗಿ ನರ್ಸಿಂಗ್ ಮತ್ತು ಅಲೈಡ್ ಹೆಲ್ತ್ ಸೈನ್ಸಸ್ ಕಾಲೇಜುಗಳಿಗೆ ಮೂಲ ಸೌಕರ್ಯಗಳಿಲ್ಲದಿದ್ದರೂ ಅನುಮತಿ ನೀಡಿ ಇಂಡಿಯನ್ ನರ್ಸಿಂಗ್ ಕೌನ್ಸಿಲ್ ಅವರು ಹೊರಡಿಸಿರುವ ಮಾರ್ಗಸೂಚಿಗಳನ್ನು ಉಲ್ಲಂಘಿಸಿರುವ ವಿಷಯವನ್ನು ಪರಿಶೀಲಿಸಿ ವರದಿ ಸಲ್ಲಿಸಲು ರಚಿಸಲಾಗಿರುವ ವಿಶೇಷ ಸದನ ಸಮಿತಿಗಳ ಕಾಲಾವಧಿಯನ್ನು 14.01.2023 ರಿಂದ ಹನ್ನೆರೆಡು ತಿಂಗಳುಗಳಿಗೆ ವಿಸ್ತರಿಸುವ ಪ್ರಸ್ತಾವವನ್ನು ಮಂಡಿಸಿ ಸದನದ ಸಹಮತಿಯನ್ನು ಪಡೆಯಲಾಯಿತು.

ಭಾರತ ಲೆಕ್ಕನಿಯಂತ್ರಕರು ಮತ್ತು ಮಹಾಲೆಕ್ಕಪರಿಶೋಧಕರು, ಇಲಾಖೆಗಳು ಮತ್ತು ಸಾರ್ವಜನಿಕ ವಲಯ ಉದ್ಯಮಗಳ ಮೇಲಿನ ಅನುಪಾಲನಾ ವರದಿ (2022ನೇ ವರ್ಷದ ವರದಿ ಸಂಖ್ಯೆ–7), ಲೋಕೋಪಯೋಗಿ ಇಲಾಖೆಯಲ್ಲಿ ರಸ್ತೆ ಕಾಮಗಾರಿಗಳ ಯೋಜನೆ ಮತ್ತು ಗುತ್ತಿಗೆ ನಿರ್ವಹಣೆ ಮೇಲಿನ ಕಾರ್ಯನಿರ್ವಹಣಾ ವರದಿ (2022ನೇ ವರ್ಷದ ವರದಿ ಸಂಖ್ಯೆ–8), ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿ (2022ನೇ ವರ್ಷದ ವರದಿ ಸಂಖ್ಯೆ–9), ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯಕ್ಷಮತೆಯ ಮೇಲಿನ ಕಾರ್ಯನಿರ್ವಹಣಾ ಲೆಕ್ಕಪರಿಶೋಧನಾ ವರದಿ (2022ನೇ ವರ್ಷದ ವರದಿ ಸಂಖ್ಯೆ–10), ಮಾರ್ಚ್ 2021ಕ್ಕೆ ಕೊನೆಗೊಂಡ ವರ್ಷಕ್ಕೆ ಸಂಬಂಧಿಸಿದ ಅನುಪಾಲನಾ ಲೆಕ್ಕಪರಿಶೋಧನಾ ವರದಿ (2023ನೇ ವರ್ಷದ ವರದಿ ಸಂಖ್ಯೆ–01), ರಾಜ್ಯ ಹಣಕಾಸು ಸಂಸ್ಥೆಗೆ ಸಂಬಂಧಿಸಿದ 2020–2021ನೇ ಸಾಲಿನ ವರದಿ ಹಾಗೂ 2021–2022ನೇ ಸಾಲಿನ ಪೂರಕ ಅಂದಾಜುಗಳನ್ನು (ಮೂರನೇ ಹಾಗೂ ಅಂತಿಮ ಕಂತು) ಮಂಡಿಸಲಾಯಿತು.

ಪ್ರಸ್ತುತ ಅಧಿವೇಶನದಲ್ಲಿ ಒಟ್ಟು 1041 ಪ್ರಶ್ನೆಗಳನ್ನು ಸ್ವೀಕರಿಸಿದ್ದು, ಅದರಲ್ಲಿ 135 ಪ್ರಶ್ನೆಗಳನ್ನು ಚುಕ್ಕೆ ಗುರುತಿನ ಪ್ರಶ್ನೆಗಳನ್ನಾಗಿ ಅಂಗೀಕರಿಸಿದ್ದು, ಅವುಗಳ ಪೈಕಿ 100 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 16 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು. ಲಿಖಿತ ಮೂಲಕ ಉತ್ತರಿಸುವ ಒಟ್ಟು **906** ಪ್ರಶ್ನೆಗಳ ಪೈಕಿ 303 ಪ್ರಶ್ನೆಗಳಿಗೆ ಸದನದಲ್ಲಿ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 58ರಡಿಯಲ್ಲಿ ಅರ್ಧಗಂಟೆ ಕಾಲಾವಧಿ ಚರ್ಚೆಗಾಗಿ ಒಟ್ಟು 02 ಸೂಚನೆಗಳನ್ನು ಸ್ವೀಕರಿಸಲಾಗಿದ್ದು, ಅವುಗಳ ಪೈಕಿ 01 ಸೂಚನೆಗೆ ಸದನದಲ್ಲಿ ಚರ್ಚೆಯಾಗಿರುತ್ತದೆ.

ನಿಯಮ 72ರಡಿಯಲ್ಲಿ 122 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 11 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 28 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ನಿಯಮ 330ರಡಿಯಲ್ಲಿ 70 ಸೂಚನೆಗಳನ್ನು ಸ್ವೀಕರಿಸಿದ್ದು, ಅವುಗಳ ಪೈಕಿ 06 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಯಿತು ಹಾಗೂ 18 ಸೂಚನೆಗಳಿಗೆ ಉತ್ತರಗಳನ್ನು ಮಂಡಿಸಲಾಯಿತು.

ಶೂನ್ಯ ವೇಳೆಯ ಒಟ್ಟು 65 ಸೂಚನೆಗಳ ಪೈಕಿ 12 ಸೂಚನೆಗಳಿಗೆ ಸದನದಲ್ಲಿ ಉತ್ತರಿಸಲಾಗಿದ್ದು, **20** ಸೂಚನೆಗಳಿಗೆ ಉತ್ತರಗಳನ್ನು ಸದನದಲ್ಲಿ ಮಂಡಿಸಲಾಯಿತು.

ವಿಧಾನ ಸಭೆಯಿಂದ ಅಂಗೀಕೃತರೂಪದಲ್ಲಿರುವ 13 ವಿಧೇಯಕಗಳಿಗೆ ವಿಧಾನ ಪರಿಷತ್ತು ತನ್ನ ಸಹಮತಿಯನ್ನು ನೀಡಿರುತ್ತದೆ.

**ಮಾನ್ಯ ಸಭಾನಾಯಕರು ಮಾತನಾಡಿದ ನಂತರ:-**

ಮಾನ್ಯ ಮುಖ್ಯಮಂತ್ರಿಗಳಿಗೆ, ಮಾನ್ಯ ಸಭಾನಾಯಕರಿಗೆ, ವಿರೋಧ ಪಕ್ಷದ ನಾಯಕರಿಗೆ, ಎಲ್ಲಾ ಮಂತ್ರಿ ವರ್ಗದವರಿಗೆ, ಸರ್ಕಾರದ ಮುಖ್ಯ ಸಚೇತಕರಿಗೆ, ವಿರೋಧ ಪಕ್ಷದ ಮುಖ್ಯಸಚೇತಕರಿಗೆ, ಪತ್ರಿಕಾ ಹಾಗೂ ಮಾಧ್ಯಮ ವರದಿಗಾರರಿಗೆ, ವಿಧಾನ ಪರಿಷತ್ತಿನ ಸಚಿವಾಲಯದ ಅಧಿಕಾರಿ/ನೌಕರ ವರ್ಗದವರಿಗೆ ಮತ್ತು ಸರ್ಕಾರದ ಎಲ್ಲಾ ಅಧಿಕಾರಿ/ನೌಕರ ವೃಂದದವರಿಗೆ ಸದನದ ಕಾರ್ಯಕಲಾಪಗಳನ್ನು ಸುಗಮವಾಗಿ ನಡೆಸಲು ಸಹಕರಿಸಿದ್ದಕ್ಕೆ ತುಂಬು ಹೃದಯದ ಧನ್ಯವಾದಗಳನ್ನು ಸಲ್ಲಿಸುತ್ತಾ, ಸಂಜೆ 5.50 ಗಂಟೆಯಲ್ಲಿ ರಾಷ್ಟ್ರಗೀತೆಯನ್ನು ನುಡಿಸುವುದರ ಮೂಲಕ ಮಾನ್ಯ ಸಭಾಪತಿಯವರು(ಶ್ರೀ ಬಸವರಾಜ ಶಿವಲಿಂಗಪ್ಪ ಹೊರಟ್ಟಿ) ಅನಿರ್ಧಿಷ್ಟ ಕಾಲದವರೆಗೆ ಮುಂದೂಡಿದರು.

****

ಸರ್ಕಾರಿ ಮುದ್ರಣಾಲಯ, ವಿಕಾಸಸೌಧ ಘಟಕ, ಬೆಂಗಳೂರು. ಕಾ.ಸೂ.944/ಪಿಎ